# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 361(2724) |
| ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 28.03.2022. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ಪ್ರತಿಷ್ಠಿತ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ನೂರು ವರ್ಷ ಪೂರೈಸಿದ್ದು, ಈ ಕಾಲೇಜಿನಲ್ಲಿ ಮೂಲಸೌಲಭ್ಯಗಳ ಹಾಗೂ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಈ ಕಾಲೇಜಿಗೆ ಐ.ಐ.ಟಿ ಮಾದರಿಯಲ್ಲಿ ಸ್ವಾಯತ್ತ ಸಂಸ್ಥೆ ಎಂದು ಮಾನ್ಯತೆ ನೀಡಿ ಆದೇಶ ಹೊರಡಿಸಿದ್ದರೂ ಆಯವ್ಯಯದಲ್ಲಿ ಅನುದಾನ ನಿಗಧಿ ಮಾಡದಿರಲು ಕಾರಣಗಳೇನು; | ವಿಶ್ವವಿದ್ಯಾಲಯ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಈ ಕಾಲೇಜನ್ನು ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ಅಧಿನಿಯಮ-2021ರನ್ವಯ 2021-22ನೇ ಸಾಲಿನಿಂದ ವಿಶ್ವವಿದ್ಯಾಲಯವನ್ನಾಗಿ ಘೋಷಿಸಲಾಗಿದೆ.<br>ಸದರಿ ವಿಶ್ವವಿದ್ಯಾಲಯಕ್ಕೆ ಪ್ರತ್ಯೇಕ ಲೆಕ್ಕ-ಶೀರ್ಷಿಕೆ ಸೃಜಿಸಿ ಅಗತ್ಯ ಅನುದಾನ ಒದಗಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| (ಇ) | ಈ ಕಾಲೇಜಿಗೆ ಬೋಧಕ ಸಿಬ್ಬಂದಿ ಇಲ್ಲದೆ ರಾಷ್ಟ್ರೀಯ ಮಾನ್ಯತಾ ಮಂಡಳಿಯ (N B A) ಮಾನ್ಯತೆ ಪಡೆಯಲು ಸಾಧ್ಯವೆ; | ವಿಶ್ವವಿದ್ಯಾಲಯವನ್ನಾಗಿ ಘೋಷಿಸುವ ಪೂರ್ವದಲ್ಲಿ ಸದರಿ ಕಾಲೇಜಿನಲ್ಲಿ 139 ಬೋಧಕ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 83 ಹುದ್ದೆಗಳು ಭರ್ತಿಯಾಗಿವೆ. ಖಾಯಂ ಬೋಧಕ ಸಿಬ್ಬಂದಿ ಶೇಕಡಾ 68 ರಷ್ಟು ನೇಮಕಾತಿಯ ನಂತರ ರಾಷ್ಟ್ರೀಯ ಮಾನ್ಯತಾ ಮಂಡಳಿಯು ಮಂಡಳಿಯ (NBA) ಮಾನ್ಯತೆಗಾಗಿ ಅರ್ಜಿ ಸಲ್ಲಿಸಲಾಗುವುದು. |
| (ಈ) | ಸಿಬ್ಬಂದಿ ನೇಮಕಾತಿಗೆ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು? | ಅಗತ್ಯ ಸಿಬ್ಬಂದಿ ನೇಮಕಾತಿಗೆ ಸಂಬಂಧಿಸಿದಂತೆ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಇಡಿ 66 ಹೆಚ್‌ಪಿಟಿ 2022

**(ಡಾ: ಅಶ್ವತ್ಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

Scanned with CamScanner